(1)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016-17 ಮತ್ತು 2017-18ನೇ ಸಾಲಿನಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಯಡಿ 2,50,000ಮನೆಗಳ ಗುರಿಯನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015, ದಿನಾಂಕ:16.11.2015.
2. 2016-17ನೇ ಸಾಲಿನ ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ-224.
3. ಸರ್ಕಾರದ ಆದೇಶ ಸಂಖ್ಯೆ:145 ಸಿಎಸ್‌ಎಸ್ 2015, ದಿನಾಂಕ:18.01.2016.
4. ಸರ್ಕಾರದ ಮಾರ್ಗಸೂಚಿ ಸಂಖ್ಯೆ:ವಇ 316 ಹೆಚ್‌ಎಎಂ 2015, ದಿನಾಂಕ:10.03.2016.
5. ಸರ್ಕಾರದ ಆದೇಶ ಸಂಖ್ಯೆ:33 ಹೆಚ್‌ಎಹೆಚ್ 2016(ಭಾ-2) ದಿನಾಂಕ:12.07.2016

**ಪ್ರಸ್ತಾವನೆ:** 84400.

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಯ ಮಾರ್ಗಸೂಚಿಯು ಗ್ರಾಮೀಣ ಪ್ರದೇಶದ ಎಲ್ಲಾ ವಸತಿ ಯೋಜನೆಗಳಿಗೆ ಅನ್ವಯಿಸುವಂತೆ ಆದೇಶಿಸಲಾಗಿದೆ. ಮೇಲೆ ಓದಲಾದ(2)ರ ಆಯವ್ಯಯದ ಭಾಷಣದ ಕಂಡಿಕೆ-224ಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ. "ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಗೆ ಹೆಚ್ಚಿನ ಸಮಯ ತಗುಲುತ್ತದೆ. ಆದ್ದರಿಂದ ವಸತಿ ಯೋಜನೆಗಳ ತ್ವರಿತ ಅನುಷ್ಠಾನಕ್ಕಾಗಿ 2016-17 ಮತ್ತು 2017-18ನೇ ಸಾಲಿನ ಗುರಿಗಳಿಗೆ ಅನುಗುಣವಾಗಿ ಆರು ಲಕ್ಷ ಫಲಾನುಭವಿಗಳನ್ನು (ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಅಡಿಯಲ್ಲಿ 2.5ಲಕ್ಷ, ಬಸವ ಗ್ರಾಮೀಣ ವಸತಿ ಯೋಜನೆ ಅಡಿ 2,10,000 ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 80,000 ವಾಜಪೇಯಿ ನಗರ ವಸತಿ ಯೋಜನೆಯಡಿ 40,000 ಮತ್ತು "ದೇವರಾಜ್ ಅರಸು ವಸತಿ ಯೋಜನೆ" ಅಡಿ 20,000 ಮನೆಗಳು) ಏಕಕಾಲಕ್ಕೆ ಆಯ್ಕೆ ಮಾಡಲು ತೀರ್ಮಾನಿಸಲಾಗಿದೆ. 2016-17ನೇ ವರ್ಷದಲ್ಲಿ 3 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಳಿಸಲಾಗುವುದು" ಎಂದಿದೆ.

"ಡಾ. ಬಿ.ಆರ್.ಅಂಬೇಡ್ಕರ್ ನಿವಾಸ್" ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:16.11.2015ರಂದು ಹೊರಡಿಸಲಾಗಿರುವ ಆದೇಶ ಮತ್ತು ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ ಸಾಮಾಜಿಕ ಮತ್ತು ಆರ್ಥಿಕ ಜಾತಿ ಜನಗಣತಿ-2011ರ ಸಮೀಕ್ಷೆಯ ವರದಿಯಂತೆ ಕಚ್ಚಾ ಮನೆಗಳನ್ನು ಹೊಂದಿರುವ ಅರ್ಹ ವಸತಿ ರಹಿತರ ಕುಟುಂಬಗಳ ಸಂಖ್ಯೆಗೆ ಅನುಗುಣವಾಗಿ ತಾಲ್ಲೂಕುವಾರು ಲಭ್ಯವಿರುವ ಮಾಹಿತಿಯನ್ನು ಆಧರಿಸಿ ಗುರಿ ನಿಗದಿಪಡಿಸಲು ನಿರ್ಧರಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4)ರಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(5)ರಲ್ಲಿ ಸಾಮಾಜಿಕ ಆರ್ಥಿಕ ಜಾತಿ ಜನಗಣತಿ 2011ರ ವರದಿಯಲ್ಲಿನ ಕಚ್ಚಾ ಮನೆಗಳಲ್ಲಿ ವಾಸಿಸುವ ಹಾಗೂ ವಸತಿರಹಿತರ ವರದಿಯ ಆಧಾರದ ಮೇಲೆ ತಾಲ್ಲೂಕು ಪಂಚಾಯತಿವಾರು ಗುರಿಯ ಬದಲು ಗ್ರಾಮ ಪಂಚಾಯತವಾರು ಗುರಿ ಹಂಚಿಕೆ ಮಾಡಲು ಮತ್ತು ಸಾಮಾಜಿಕ ಆರ್ಥಿಕ ಜಾತಿ ಜನಗಣತಿ -2011ರ ವರದಿಯಲ್ಲಿ ಕೈಬಿಟ್ಟಿರುವ ಯಾವುದೇ ಅರ್ಹ ಫಲಾನುಭವಿಯನ್ನು ಪರಿಶೀಲಿಸಿ ಗ್ರಾಮ ಸಭೆಯಲ್ಲಿ ಅಳವಡಿಸುವಂತೆ ತಿಳಿಸಲಾಗಿದೆ.

ವಿವಿಧ ವಸತಿ ಯೋಜನೆಗಳಡಿ 2016-17ನೇ ಸಾಲಿನಲ್ಲಿ ನಿಗದಿಪಡಿಸಲಾದ 6.00ಲಕ್ಷ ಮನೆಗಳ ಪೈಕಿ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ನಿಗದಿಪಡಿಸಿರುವ 2.50ಲಕ್ಷ ಮನೆಗಳ ಹಂಚಿಕೆಗೆ ಸಂಬಂಧಿಸಿದಂತೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ವಇ 34 ಹೆಚ್‌ಎಎಂ 2016, ಬೆಂಗಳೂರು, ದಿನಾಂಕ:14.07.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ವಸತಿ ಯೋಜನೆಗಳ ತ್ವರಿತ ಅನುಷ್ಠಾನಕ್ಕಾಗಿ 2016-17 ಮತ್ತು 2017-18ನೇ ಸಾಲಿಗೆ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯಡಿ 2,50,000 ಗುರಿ ನಿಗದಿಪಡಿಸಲಾಗಿದೆ. ಅದರಲ್ಲಿ ಗ್ರಾಮೀಣ ಪ್ರದೇಶಕ್ಕೆ 1,60,000 ಮನೆಗಳನ್ನು ಮತ್ತು ನಗರ ಪ್ರದೇಶಕ್ಕೆ 90,000 ಮನೆಗಳ ಗುರಿಯನ್ನು ನಿಗದಿಪಡಿಸಲಾಗಿದೆ. ಇದರಲ್ಲಿ 2015-16ನೇ ಸಾಲಿನಲ್ಲಿ, ಈಗಾಗಲೇ ಗ್ರಾಮೀಣ ಪ್ರದೇಶಕ್ಕೆ 4,097 ಮತ್ತು ನಗರ ಪ್ರದೇಶಕ್ಕೆ 1,947 ಗುರಿಯನ್ನು ನಿಗದಿಪಡಿಸಿ 2016-17ನೇ ಸಾಲಿನ ಗುರಿಯಲ್ಲಿ ಪರಿಗಣಿಸುವಂತೆ ಆದೇಶಿಸಲಾಗಿದೆ. ಉಳಿದ ಮನೆಗಳ ಗುರಿಯಲ್ಲಿ ಗ್ರಾಮೀಣ ಪ್ರದೇಶಕ್ಕೆ 1,55,903 ಮತ್ತು ನಗರ ಪ್ರದೇಶಕ್ಕೆ 88,053 ಮನೆಗಳ ಗುರಿಯನ್ನು ನಿಗದಿಪಡಿಸಿ ಆದೇಶಿಸಿದೆ.

ಬೆಂಗಳೂರು. 18 JUL 2016

ಸರ್ಕಾರದ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015 ದಿನಾಂಕ:16.11.2015ರಂತೆ ಮತ್ತು ಸಾಮಾಜಿಕ ಆರ್ಥಿಕ ಜಾತಿ ಜನಗಣತಿ 2011ರ ವರದಿಯ ಆಧಾರದ ಮೇಲೆ ಹಾಗೂ ಕಚ್ಚಾ ಮನೆಗಳಲ್ಲಿ ವಾಸಿಸುವ ವಸತಿರಹಿತರ ಮಾಹಿತಿಯ ಆಧಾರದ ಮೇಲೆ ತಾಲ್ಲೂಕು ಪಂಚಾಯಿತಿವಾರು ಗುರಿಯ ಬದಲು ಗ್ರಾಮ ಪಂಚಾಯಿತಿವಾರು ಗುರಿ ಹಂಚಿಕೆ ಮಾಡಲು ಹಾಗೂ ಸಾಮಾಜಿಕ ಆರ್ಥಿಕ ಜಾತಿ ಜನಗಣತಿ-2011ರ ವರದಿಯಲ್ಲಿ ಕೈಬಿಟ್ಟಿರುವ ಯಾವುದೇ ಅರ್ಹ ಫಲಾನುಭವಿಯನ್ನು ಪರಿಶೀಲಿಸಿ ಗ್ರಾಮ ಸಭೆಯಲ್ಲಿ ಪರಿಗಣಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ:ವಇ 33 ಹೆಚ್‌ಎಹೆಚ್ 2016(ಭಾ-2)ರಲ್ಲಿ ತಿಳಿಸಿರುವಂತೆ ಕ್ರಮ ವಹಿಸಲು ಆದೇಶಿಸಿದೆ.

ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ಮನೆಗಳ ನಿರ್ಮಾಣಕ್ಕೆ ತಗಲುವ ವೆಚ್ಚವನ್ನು 2016-17ನೇ ಸಾಲಿನ ಆಯವ್ಯಯದಲ್ಲಿ ವಸತಿ ಇಲಾಖೆಗೆ ಈ ಯೋಜನೆಯ ಲೆಕ್ಕ ಶೀರ್ಷಿಕೆಯಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಸೂಕ್ತ ಸುತ್ತೋಲೆಯನ್ನು ಹೊರಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ನಜೀರ್ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವಸತಿ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) (ಆಡಿಟ್-1 ಮತ್ತು 2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಇಲಾಖೆ.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ.
4. ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ವಿಭಾಗಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರು, ಎಲ್ಲಾ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯ್ತಿ ಹಾಗೂ ಆಯುಕ್ತರು, ನಗರಸಭೆ ರವರಿಗೆ ಮತ್ತು ಇತರ ಸಂಬಂಧಪಟ್ಟ ಅಧಿಕಾರಿಗಳಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತರವರ ಮುಖಾಂತರ.
5. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ-ಗ್ರೇಡ್-I, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ